ಇ) ಮಂಗಳೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 03 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿವೆ.

1. ಕಾವೂರು ಸಪ್ರದಕಾ (ಮಂ. ಉತ್ತರ)
2. ರಥಬೀದಿಯಲ್ಲಿ ಸಪ್ರದಕಾ (ಮಂ. ದಕ್ಷಿಣ) ಹಾಗೂ
3. ಸರ್ಕಾರಿ ಮಹಿಳಾ ಕಾಲೇಜು

ಹೆಚ್ಚುವರಿ ಕಾಲೇಜಿನ ಅಗತ್ಯತೆ ಸಧ್ಯಕ್ಕೆ ಇರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

501 ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೂತನವಾಗಿ ಪಾಲಿಟೆಕ್ನಿಕ್‌ಗಳನ್ನು ಆರಂಭಿಸುವ ಸರ್ಕಾರದ ನಿರ್ಧಾರದ ಕುರಿತು ಮಾಹಿತಿ ನೀಡುವುದು;

ಆ) ಈ ಸಾಲಿನಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ವತಿಯಿಂದ ಎಷ್ಟು ಪಾಲಿಟೆಕ್ನಿಕ್‌ಗಳನ್ನು ಆರಂಭಿಸಲಾಗುತ್ತಿದೆ;

ಇ) ಕಡೂರು ಪಟ್ಟಣಕ್ಕೆ ಈ ಸಾಲಿನಲ್ಲಿ ನೂತನ ಪಾಲಿಟೆಕ್ನಿಕ್ ನೀಡುವ ಬಗ್ಗೆ ಸರ್ಕಾರದ ನಿಲುವೇನು;

ಈ) ಪದವಿ ತರಗತಿಗಳಿಗಾಗಿ ನೂತನ ಕೋರ್ಸ್‌ಗಳನ್ನು ಆರಂಭಿಸುವ ಕುರಿತು ಮಾಹಿತಿ ನೀಡುವುದು;

ಉ) ಕುವೆಂಪು ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ ಕಡೂರು ಇಲ್ಲಿಗೆ ಈ ಸಾಲಿನಲ್ಲಿ ಎಷ್ಟು (ಅಭಿವೃದ್ಧಿಗಾಗಿ) ಅನುದಾನ ಒದಗಿಸಲಾಗಿದೆ?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ನೂತನವಾಗಿ ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಆರಂಭಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿ ಸಧ್ಯಕ್ಕೆ ಇರುವುದಿಲ್ಲ.

ಆ) 2009–10ನೇ ಸಾಲಿಗೆ ರಾಜ್ಯ ಸರ್ಕಾರದ ವತಿಯಿಂದ 22 ಹೊಸ ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ. ಉಳಿದಂತೆ ಕೇಂದ್ರ ಸರ್ಕಾರದ ವತಿಯಿಂದ ಯಾವುದೇ ಪಾಲಿಟೆಕ್ನಿಕ್ ಪ್ರಾರಂಭಿಸಲಾಗಿಲ್ಲ.

ಇ) ಮುಂಬರುವ ವರ್ಷಗಳಲ್ಲಿ ಅನುದಾನದ ಲಭ್ಯತೆಗನುಗುಣವಾಗಿ ಮಂಜೂರು ಮಾಡಲು ಪರಿಶೀಲಿಸಲಾಗುವುದು.

ಈ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ನೂತನ ಕೋರ್ಸ್‌ಗಳನ್ನು ಪ್ರಾರಂಭಿಸುವ ಮುನ್ನ ಸಂಬಂಧಿಸಿದ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗಾಗಿ ಅರ್ಜಿ ಸಲ್ಲಿಸಿ, ಅನುಮತಿ ಪಡೆದನಂತರ, ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತದೆ. ಈ ರೀತಿ ಬಂದಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಅಗತ್ಯತೆ ಕಂಡುಬಂದ ಕೋರ್ಸ್‌ಗಳನ್ನು ಕಾಲೇಜುಗಳಲ್ಲಿ ಅನುಷ್ಠಾನ ಗೊಳಿಸಲಾಗುವುದು.

ಉ) ರೂ. 200.00 ಲಕ್ಷಗಳನ್ನು ಒದಗಿಸಲಾಗಿದೆ.

797 ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿರುವ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು (ವಿವರಗಳನ್ನು ನೀಡುವುದು);

ಆ) ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿರುವ ಪಶು ಚಿಕಿತ್ಸಾಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿವೆಯೇ;

ಇ) ಹಾಗಿಲ್ಲದಿದ್ದಲ್ಲಿ, ಪಶುಚಿಕಿತ್ಸಾಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ ಎಂದು ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗುವುದು;

ಉ) ಮಂಡ್ಯ ನಗರ ಗುತ್ತಲ ಗ್ರಾಮದಲ್ಲಿ ಪಶು ಚಿಕಿತ್ಸಾಲಯಕ್ಕೆ ಸ್ವಂತ ಕಟ್ಟಡವಿಲ್ಲದೆ ಸರ್ಕಾರಿ ಶಾಲಾಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಊ) ಹಾಗಿದ್ದಲ್ಲಿ, ಗುತ್ತಲು ಗ್ರಾಮದಲ್ಲಿ ಪಶು ಚಿಕಿತ್ಸಾಲಯಕ್ಕೆ ಎಂದು ಸ್ವಂತ ಕಟ್ಟಡವನ್ನು ನಿರ್ಮಿಸಲಾಗುವುದು ಮತ್ತು ಈ ಕಟ್ಟಡಕ್ಕೆ ಸರ್ಕಾರ ನಿಗದಿಪಡಿಸಿರುವ ಅನುದಾನದ ಮೊತ್ತ ಎಷ್ಟು;

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) 26

ವಿವರಗಳನ್ನು ಅನುಬಂಧ–1ರಲ್ಲಿ ನೀಡಿದೆ.

ಆ) 15 ಪಶುವೈದ್ಯಕೀಯ ಸಂಸ್ಥೆಗಳು ಮಾತ್ರ ಸ್ವಂತ ಕಟ್ಟಡಗಳನ್ನು ಹೊಂದಿದ್ದು, ಉಳಿದ 11 ಪಶುವೈದ್ಯ ಸಂಸ್ಥೆಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ.